## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 722 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : ಶ್ರೀ ಐವನ್ ಡಿ'ಸೋಜಾ (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : 10.03.2026 |
| ಉತ್ತರಿಸುವ ಸಚಿವರು | : ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು |

*****

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಮಂಗಳೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಬೈಕಂಪಾಡಿ ಮಾರುಕಟ್ಟೆ ಕಾಮಗಾರಿ ಯಾವ ಹಂತದಲ್ಲಿದೆ; ಇದಕ್ಕೆ ಬಿಡುಗಡೆ ಮಾಡಿದ ಅನುದಾನ ಎಷ್ಟು, (ವಿವರ ನೀಡುವುದು) | ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಮಂಗಳೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಬೈಕಂಪಾಡಿ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ 1998ರಲ್ಲಿ ಸಮಿತಿಯ ಸ್ವಂತ ನಿಧಿಯಿಂದ ಕಾಮಗಾರಿಯನ್ನು ಕೈಗೊಂಡು ಪೂರ್ಣಗೊಳಿಸಲಾಗಿರುತ್ತದೆ. |
| ಆ) | ಮಂಗಳೂರು ನಗರದಲ್ಲಿ ಕೃಷಿ ಮಾರಾಟ ಇಲಾಖೆಯಿಂದ ಮಾರುಕಟ್ಟೆ ಪ್ರಾಂಗಣದಲ್ಲಿ ಹಣ್ಣು ಮತ್ತು ತರಕಾರಿ ಮಾರುಕಟ್ಟೆ ಕಾಮಗಾರಿಗೆ ವೆಚ್ಚ ಮಾಡಿದ ಹಣ ಎಷ್ಟು; (ವಿವರ ನೀಡುವುದು) | ಬೈಕಂಪಾಡಿ ಮಾರುಕಟ್ಟೆ ಪ್ರಾಂಗಣದಲ್ಲಿನ ಹಣ್ಣು ಮತ್ತು ತರಕಾರಿ ಮಾರುಕಟ್ಟೆಯಲ್ಲಿ ಸಮಿತಿಯ ಸ್ವಂತ ನಿಧಿಯಿಂದ ರೂ. 1238.23 ಲಕ್ಷಗಳ ವೆಚ್ಚದಲ್ಲಿ ಕಾಮಗಾರಿಗಳನ್ನು ಕೈಗೊಂಡು 2025 ರಲ್ಲಿ ಪೂರ್ಣಗೊಳಿಸಲಾಗಿರುತ್ತದೆ. |
| ಇ) | ಮಾರುಕಟ್ಟೆ ನಿರ್ಮಿಸುವಾಗ 08 ಅಂತಸ್ತಿನ ಮಾರುಕಟ್ಟೆಯನ್ನು ಅವೈಜ್ಞಾನಿಕವಾಗಿ ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರಕ್ಕೆ ಉಂಟಾಗಿರುವ ನಷ್ಟ ಎಷ್ಟು? (ವಿವರ ನೀಡುವುದು) | ಮಾರುಕಟ್ಟೆ ಪ್ರಾಂಗಣದ ಕಟ್ಟಡದಲ್ಲಿ ವೈಜ್ಞಾನಿಕವಾಗಿ ವಾಹನ ನಿಲುಗಡೆಗೆ ನೆಲಮಾಳಿಗೆ ಮತ್ತು ನೆಲ ಮಹಡಿಯಲ್ಲಿ ಮಾರುಕಟ್ಟೆ ಚಟುವಟಿಕೆಗಳಿಗೆ ಬೇಕಾದಂತಹ ಹರಾಜುಕಟ್ಟೆ ಮತ್ತು Mezzanine floor ನಲ್ಲಿ ಕಛೇರಿ ನಿರ್ಮಿಸಲಾಗಿರುತ್ತದೆ. ಯಾವುದೇ 08 ಅಂತಸ್ತಿನ ಕಟ್ಟಡವನ್ನು ನಿರ್ಮಿಸಿರುವುದಿಲ್ಲ. |

**ಸಿಇ 82 ಎಂಆರ್‌ಇ 2026**

**(ಶಿವಾನಂದ ಎಸ್. ಪಾಟೀಲ)**
**ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ**
**ಹಾಗೂ ಕೃಷಿ ಮಾರುಕಟ್ಟೆ ಸಚಿವರು**